ಕರ್ನಾಟಕ ಸರ್ಕಾರ

**ಆಯುಕ್ತರ ಕಛೇರಿ, ಶಾಲಾ ಶಿಕ್ಷಣ ಇಲಾಖೆ, ನೃಪತುಂಗ ರಸ್ತೆ, ಬೆಂಗಳೂರು-560001.**

ಸಂಖ್ಯೆ: ಸಿ7(2)/ಪ್ರಾಶಿಅ/ರಾ.ಪ.ಪು.ಬ/25/2024 ದಿನಾಂಕ: 03-10-2024

**:: ಸುತ್ತೋಲೆ ::**

ವಿಷಯ: ರಾಜ್ಯಪಠ್ಯಕ್ರಮದ ಖಾಸಗಿ ಅನುದಾನಿತ ಹಾಗೂ ಅನುದಾನ ರಹಿತ ಶಾಲೆಗಳಲ್ಲಿ ರಾಜ್ಯ ಪಠ್ಯಕ್ರಮ ಹಾಗೂ ಪಠ್ಯಪುಸ್ತಕಗಳನ್ನು ಕಡ್ಡಾಯವಾಗಿ ಅನುಸರಿಸುವ ಕುರಿತು.

ಉಲ್ಲೇಖ:
1. ಕರ್ನಾಟಕ ಶಿಕ್ಷಣ ಕಾಯ್ದೆ- 1983 ರ ಕಾಯ್ದೆಯ ಅಧ್ಯಾಯ-V ರ ಸೆಕ್ಷನ್ 7
2. Karnataka Educational Institutions [classification, Regulation and Prescription of Curricula etc] Rules-1995ರ ನಿಯಮ-19.
3. ಕನ್ನಡ ಕಲಿಕಾ ಅಧಿನಿಯಮ-2015 ಮತ್ತು ಕನ್ನಡ ಭಾಷಾ ಕಲಿಕಾ ನಿಯಮಗಳು-2017

*********

ವಿಷಯಕ್ಕೆ ಸಂಬಂಧಿಸಿದಂತೆ, ಉಲ್ಲೇಖ(1) ರಂತೆ ರಾಜ್ಯ ಸರ್ಕಾರವು ಶಿಕ್ಷಣ ಸಂಸ್ಥೆಗಳ ಸಂಬಂಧದಲ್ಲಿ ಪಾಠಕ್ರಮ, ಪಠ್ಯವಸ್ತು ಹಾಗೂ ಪಠ್ಯಪುಸ್ತಕಗಳನ್ನು ನಿಗದಿಪಡಿಸಬಹುದಾಗಿರುತ್ತದೆ. ಮುಂದುವರೆದು Karnataka Educational Institutions [classification, Regulation and Prescription of Curricula etc] Rules-1995ರ ನಿಯಮ-19. ರ ಉಪನಿಯಮ-3 ರಂತೆ ರಾಜ್ಯಪಠ್ಯ ಕ್ರಮವನ್ನು ಅನುಸರಿಸುತ್ತಿರುವ ಎಲಾ ಶಿಕ್ಷಣ ಸಂಸ್ಥೆಗಳು ರಾಜ್ಯ ಸರ್ಕಾರದ ಸಕ್ಷಮ ಪ್ರಾಧಿಕಾರವು ನಿಗದಿಪಡಿಸುವ ಪಠ್ಯಕ್ರಮ ಮತ್ತು ಪಠ್ಯಪುಸ್ತಕಗಳನ್ನೇ ಕಡ್ಡಾಯವಾಗಿ ಅನುಸರಿಸುವುದು ಮತ್ತು ಹೆಚ್ಚುವರಿಯಾಗಿ ಯಾವುದೇ ಇತರೆ ಪಠ್ಯಕ್ರಮ ಅಥವಾ ಪಠ್ಯಪುಸ್ತಕಗಳನ್ನು ಅನುಸರಿಸುವಂತಿಲ್ಲ ಎಂದು ಸ್ಪಷ್ಟವಾಗಿ ತಿಳಿಸಲಾಗಿರುತ್ತದೆ.

ಅದರಂತೆ ಕರ್ನಾಟಕ ಶಿಕ್ಷಣ ಕಾಯ್ದೆ-1983ರ ಸೆಕ್ಷನ್-36ರಂತೆ ರಾಜ್ಯ ಪಠ್ಯಕ್ರಮದ ಶಾಲೆಗಳಿಗೆ ಮಾನ್ಯತೆ/ಮಾನ್ಯತೆ ನವೀಕರಣ ನೀಡುವಾಗ ಮಾನ್ಯತೆ ಪ್ರಮಾಣ ಪತ್ರದಲ್ಲಿ "ಶಾಲೆಯು ಸಂಯೋಜಿತವಾಗಿರುವ ಶಾಲೆಯು ಸಂಯೋಜಿತವಾಗಿರುವ ಶೈಕ್ಷಣಿಕ ರಾಜ್ಯ ಪಠ್ಯಕ್ರಮ ಹಾಗೂ ರಾಜ್ಯ ಪಠ್ಯಪುಸ್ತಕಗಳನ್ನು ಅನುಸರಿಸುವುದು" ಎಂದು ಷರತ್ತು ವಿಧಿಸಲಾಗಿರುತ್ತದೆ.

ಮುಂದುವರೆದು 2010-11ನೇ ಸಾಲಿನಿಂದ ರಾಜ್ಯ ಪಠ್ಯಕ್ರಮದಂತೆ ಪಠ್ಯಪುಸ್ತಕಗಳ ರಚನೆ. ಉತ್ಪಾದನೆ ಮತ್ತು ವಿತರಣೆಗೆ ಸಂಬಂಧಿಸಿದ ಸಂಪೂರ್ಣ ಕಾರ್ಯವನ್ನು ಕರ್ನಾಟಕ ಪಠ್ಯಪುಸ್ತಕ ಸಂಘ (ರಿ) ಇವರು ನಿರ್ವಹಿಸಲು ಸರ್ಕಾರವು ಆದೇಶಿಸಿರುತ್ತದೆ.

ಮೇಲ್ಕಂಡ ಅಂಶಗಳ ಹಿನ್ನಲೆಯಲ್ಲಿ, ಇಲಾಖಾ ಅನುಮತಿಯೊಂದಿಗೆ ರಾಜ್ಯದಲ್ಲಿ ನಡೆಯುತ್ತಿರುವ ರಾಜ್ಯ ಪಠ್ಯಕ್ರಮದ ಎಲ್ಲಾ ಖಾಸಗಿ ಅನುದಾನಿತ ಮತ್ತು ಅನುದಾನರಹಿತ ಶಾಲೆಗಳು 1 ರಿಂದ 10ನೇ ತರಗತಿಯ SATS ಲ್ಲಿರುವ ವಿದ್ಯಾರ್ಥಿಗಳ ದಾಖಲಾತಿಯಂತೆ ತಂತ್ರಾಂಶದ ಮೂಲಕ ಬೇಡಿಕೆಯನ್ನು ದಾಖಲಿಸುವುದು. ಖಾಸಗಿ ಅನುದಾನರಹಿತ ಶಾಲೆಗಳು ವಿದ್ಯಾರ್ಥಿಗಳ ಸಂಖ್ಯೆಗನುಗುಣವಾಗಿ ಪಠ್ಯಪುಸ್ತಕಗಳನ್ನು ಖರೀದಿಸಿ ರಾಜ್ಯ ಪಠ್ಯಪುಸ್ತಕಗಳನ್ನೇ ಅನುಸರಿಸಲು ತಮ್ಮ ವ್ಯಾಪ್ತಿಯ ಎಲ್ಲಾ ಖಾಸಗಿ ಶಾಲಾ ಆಡಳಿತ ಮಂಡಳಿಗಳಿಗೆ ಸೂಚನೆ ನೀಡಲು ತಿಳಿಸಿದೆ. ಹಾಗೂ ಉಲ್ಲೇಖ-3 ರಂತೆ ಇತರೆ ಪಠ್ಯಕ್ರಮ ಅನುಸರಿಸುವ ಶಾಲೆಗಳು ಕನ್ನಡ ಭಾಷಾ ಪಠ್ಯಪುಸ್ತಕಗಳ ಬೇಡಿಕೆ ದಾಖಲಿಸಿ ಖರೀದಿಸಿ ಅನುಸರಿಸುವಂತೆ ತಮ್ಮ ವ್ಯಾಪ್ತಿಯ ಎಲ್ಲಾ ಖಾಸಗಿ ಶಾಲಾ ಆಡಳಿತ ಮಂಡಳಿಗಳಿಗೆ ಸೂಚನೆ ನೀಡಲು ತಿಳಿಸಿದೆ.

ಯಾವುದೇ ರಾಜ್ಯ ಪಠ್ಯಕ್ರಮದ ಖಾಸಗಿ ಶಾಲೆಯು ಸದರಿ ಷರತ್ತನ್ನು ಉಲ್ಲಂಘಿಸಿದಲ್ಲಿ ಅಂತಹ ಶಾಲೆಯ ವಿರುದ್ಧ ನಿಯಮಾನುಸಾರ ಕ್ರಮ ವಹಿಸಲು ತಿಳಿಸಿದೆ.

ಆಯುಕ್ತರು
ಶಾಲಾ ಶಿಕ್ಷಣ ಇಲಾಖೆ
ಬೆಂಗಳೂರು.

**ಗೆ,**
1. ರಾಜ್ಯ ಎಲ್ಲಾ ಉಪನಿರ್ದೇಶಕರುಗಳ ಸೂಕ್ತ ಕ್ರಮಕ್ಕಾಗಿ.
2. ರಾಜ್ಯದ ಎಲ್ಲಾ ಕ್ಷೇತ್ರ ಶಿಕ್ಷಣಾಧಿಕಾರಿಗಳ ಸೂಕ್ತ ಕ್ರಮಕ್ಕಾಗಿ.

**ಪು. ತಿ.ನೋ**

**ಪ್ರತಿಯನ್ನು:**

1. ಮಾನ್ಯ ರಾಜ್ಯ ಯೋಜನಾ ನಿರ್ದೇಶಕರು. ಸಮಗ್ರ ಶಿಕ್ಷಣ-ಕರ್ನಾಟಕ. ಬೆಂಗಳೂರು
2. ಮಾನ್ಯ ಅಪರ ಆಯುಕ್ತರು, ಶಾಲಾ ಶಿಕ್ಷಣ ಇಲಾಖೆ, ಕಲಬುರಗಿ ವಿಭಾಗ, ಕಲಬುರಗಿ
3. ಮಾನ್ಯ ಅಪರ ಆಯುಕ್ತರು, ಶಾಲಾ ಶಿಕ್ಷಣ ಇಲಾಖೆ, ಧಾರವಾಡ.
4. ನಿರ್ದೇಶಕರು(ಪ್ರಾಥಮಿಕ ಶಿಕ್ಷಣ) ಆಯುಕ್ತರು ಕಛೇರಿ, ಬೆಂಗಳೂರು.
5. ನಿರ್ದೇಶಕರು(ಪ್ರೌಢ ಶಿಕ್ಷಣ) ಆಯುಕ್ತರು ಕಛೇರಿ, ಬೆಂಗಳೂರು.
6. ಕರ್ನಾಟಕ ಪಠ್ಯ ಪುಸ್ತಕ ಸಂಘ, ಶಾಲಾ ಶಿಕ್ಷಣ ಇಲಾಖೆ, 6 ನೇ ಕ್ರಾಸ್, ಸಂಪಿಗೆ ರಸ್ತೆ, 5 ನೇ ಅಡ್ಡ ವೃತ್ತದ ಹತ್ತಿರ, ಮಲ್ಲೇಶ್ವರಂ, ಬೆಂಗಳೂರು, ರವರಿಗೆ ಅಗತ್ಯ ಕ್ರಮಕ್ಕಾಗಿ.
7. ರಾಜ್ಯ ಶಿಕ್ಷಣ ಸಂಶೋಧನೆ ಮತ್ತು ತರಬೇತಿ ಇಲಾಖೆ, ರಿಂಗ್ ರಸ್ತೆ, ಹೊಸಕೆರೆಹಳ್ಳಿ, ಬೆಂಗಳೂರು ರವರಿಗೆ ಅಗತ್ಯ ಕ್ರಮಕ್ಕಾಗಿ.
8. ಕಛೇರಿಯ ಪ್ರತಿ.